ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಶೌಚಾಲಯ ನಿರ್ಮಾಣದ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

22 (61) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಗ್ರಾಮೀಣ ಭಾಗಗಳಲ್ಲಿ ಸಾಂಕ್ರಾಮಿಕ ರೋಗ ಹರಡುವುದನ್ನು ತಡೆಯಲು ಹಾಗೂ ನಿರ್ಮಲ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಬಚ್ಚಲುಗುಂಡಿ ನಿರ್ಮಾಣ ಯೋಜನೆಯು ರಾಜ್ಯದ ಎಷ್ಟು ಕುಟುಂಬಗಳಿಗೆ ತಲುಪಿದೆ;

(ಆ) ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು;

(ಇ) ಈ ಯೋಜನೆಗೆ ಸರ್ಕಾರ ನೀಡುವ ಸಹಾಯಧನ ಎಷ್ಟು ಹಾಗೂ ಇಲ್ಲಿಯವರೆಗೆ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು;

(ಈ) ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಮನೆಗಳಿಗೆ ಶೌಚಾಲಯ ನಿರ್ಮಾಣ ಮಾಡಿಕೊಂಡಿರುವ ಕುಟುಂಬಗಳಿಗೂ ಈ ಯೋಜನೆ ಅನ್ವಯವಾಗುತ್ತದೆಯೇ? (ಸಂಪೂರ್ಣ ವಿವರ ನೀಡುವುದು)